ನಿಮ್ಮದು Plan compliance ಎಲ್ಲರಿಗಿಂತ ಚೆನ್ನಾಗಿ ಆಗಿ per-capita developmental expenditure ಅವರಿಗಿಂತ ಹೆಚ್ಚು ಮಾಡಿದ ಮೇಲೆ, our place will go up. You should have been Stick. ಹಾಗಾದರೆ ಅದನ್ನು ನಾವು ಹೇಗೆ ಒಪ್ಪಿಕೊಳ್ಳುವುದಕ್ಕಾಗುತ್ತದೆ. I cannot believe all those things.

**ಶ್ರೀ ಬಿ.ಎಸ್. ಯಡಿಯೂರಪ್ಪ** : ನಿಮ್ಮನ್ನು ಒಪ್ಪಿಸುವುದು ಅಷ್ಟು ಸುಲಭವಿಲ್ಲವೆಂಬುದು ಗೊತ್ತಿದೆ, ಬಜೆಟ್ ಮೇಲಿನ ಚರ್ಚೆಗೆ ಉತ್ತರ ಕೊಡುವ ಸಮಯದಲ್ಲಿ ನಾನು ವಿವರವಾದ ಮಾಹಿತಿಯನ್ನು ಕೊಡುತ್ತೇನೆ.

**ಅಧ್ಯಕ್ಷರು** : ನಾನು ಈಗ ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ, ಪ್ರಸ್ತಾವ ಏನೆಂದರೆ,

31.3.2010 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬೇಡಿಕೆಗಳ ಸಂಖ್ಯೆ 1–5 ಮತ್ತು 7–27ಕ್ಕೆ ಸಂಬಂಧಿಸಿದಂತೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ [ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ] ಎರಡನೇ ಮತ್ತು ಅಂತಿಮ ಕಂತಿನ ಪೂರಕ ಅಂದಾಜುಗಳ ಬೇಡಿಕೆಗಳ ಪಟ್ಟಿಯಲ್ಲಿರುವ ಮೊತ್ತಕ್ಕೆ ಮೀರದ ಮೊಬಲಗನ್ನು ಮಂಜೂರು ಮಾಡುವುದು.

**ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು**

## 6. ಶಾಸನ ರಚನೆ :

### (ಅ) ವಿಧೇಯಕ ಮಂಡನೆ ಹಾಗೂ ಪ್ರಸ್ತಾವ :

**ಕರ್ನಾಟಕ ಧನವಿನಿಯೋಗ ವಿಧೇಯಕ, 2010**
**ಮಂಡನೆಗೆ ಅನುಮತಿ ಕೋರಿಕೆ**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯ ಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

**ಅಧ್ಯಕ್ಷರು** : ಪ್ರಸ್ತಾವ ಏನೆಂದರೆ,

2010ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

**ಅಧ್ಯಕ್ಷರು** : ವಿಧೇಯಕವನ್ನು ಮಂಡಿಸಲಾಗಿದೆ.

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ಧನವಿನಿಯೋಗ ವಿಧೇಯಕ, 2010**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಅಧ್ಯಕ್ಷರು** : ಪ್ರಸ್ತಾವ ಏನೆಂದರೆ,

2010ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**
**ಖಂಡ 2 ರಿಂದ 4ರವರೆಗೆ**